**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದರಾಜು ಇವರು ನಿಯಮ 72ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಕೃಷಿ ಸಚಿವರ ಉತ್ತರ.**

**ವಿಷಯ:** ರಾಜ್ಯದಲ್ಲಿ ಈಗಾಗಲೇ ಆರು ಕೃಷಿ ವಿಶ್ವವಿದ್ಯಾಲಯಗಳು (ತೋಟಗಾರಿಕೆ ಮತ್ತು ಪಶುಸಂಗೋಪನೆ) ಸೇರಿದಂತೆ ಕಾರ್ಯನಿರ್ವಹಿಸುತ್ತಿವೆ. ಈ ಆರರಲ್ಲಿ ಶೇಕಡ 55 ರಿಂದ 60 ರಷ್ಟು ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಯ ಕೊರತೆ ಇದೆ. ಈ ಹುದ್ದೆಗಳ ಭರ್ತಿಗೆ ಪ್ರಸ್ತಾವ ಸಲ್ಲಿಸಿದರೆ ಸರ್ಕಾರ ಹಣಕಾಸಿನ ಕೊರತೆ ಸೇರಿದಂತೆ ಇತರೆ ಕಾರಣಗಳನ್ನು ನೀಡುತ್ತಿದೆ. ಇಂತಹ ಸಂದರ್ಭದಲ್ಲಿ ನೂತನ ಸಮಗ್ರ ಕೃಷಿ ವಿಶ್ವವಿದ್ಯಾಲಯದ ಸ್ಥಾಪಿಸುವ ಅವಶ್ಯಕತೆ ಇದೆಯೇ, ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಬರುವ ಚಾಮರಾಜನಗರ ಜಿಲ್ಲೆಯಲ್ಲಿರುವ ಕೃಷಿ ಕಾಲೇಜಿನಲ್ಲಿ ಕಾಯಂ ಪ್ರಾಂಶುಪಾಲರು ಹಾಗೂ ಸಿಬ್ಬಂದಿ ಇಲ್ಲ. ಇಂತಹ ಪರಿಸ್ಥಿತಿಯಲ್ಲಿ ನೂತನ ಸಮಗ್ರ ಕೃಷಿ ವಿಶ್ವವಿದ್ಯಾಲಯಕ್ಕೆ ಮೂಲಸೌಕರ್ಯ ಸೇರಿದಂತೆ ಸಿಬ್ಬಂದಿ ನೇಮಕಾತಿ ಸಾಧ್ಯವೇ, ಈ ವಿಷಯವನ್ನು ಮಾನ್ಯ ಕೃಷಿ ಸಚಿವರ ಗಮನ ಸೆಳೆಯಲು ಬಯಸುತ್ತೇನೆ.

***

**ಉತ್ತರ:** ಈಗಾಗಲೇ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರಿನಲ್ಲಿ ಭಾರತ ಸರ್ಕಾರದ ಅನುದಾನಿತ, ಕೃಷಿ ವಿಜ್ಞಾನ ಕೇಂದ್ರಗಳಲ್ಲಿ ಖಾಲಿ ಇರುವ 28 ಬೋಧಕೇತರ ಹುದ್ದೆಗಳನ್ನು ನೇರ ನೇಮಕಾತಿಯಡಿ ಭರ್ತಿ ಮಾಡಿಕೊಳ್ಳಲು ದಿನಾಂಕ: 23-02-2023ರಂದು ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. ರಾಜ್ಯದ ಸರ್ಕಾರದ ಅನುದಾನದಡಿ ಖಾಲಿಯಿರುವ ಒಟ್ಟು ಬೋಧಕ ಮತ್ತು ಬೋಧಕೇತರ ಹುದ್ದೆಗಳ ಪೈಕಿ, 55 ಬೋಧಕ ಹಾಗೂ 72 ಬೋಧಕೇತರ ಹುದ್ದೆಗಳನ್ನು (20 ಸಹಾಯಕ ಹುದ್ದೆಗಳನ್ನು ನೇರನೇಮಕಾತಿಯಡಿ ಉಳಿದ ಹುದ್ದೆಗಳನ್ನು ಗುತ್ತಿಗೆ / ಹೊರಗುತ್ತಿಗೆ ಆಧಾರದಡಿ) ಭರ್ತಿ ಮಾಡಿಕೊಳ್ಳಲು ಸರ್ಕಾರದ ಅನುಮೋದನೆಯನ್ನು ನೀಡಲಾಗಿರುತ್ತದೆ.

ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಧಾರವಾಡ, ರಾಯಚೂರು ಹಾಗೂ ಶಿವಮೊಗ್ಗದಲ್ಲಿನ ಬೋಧಕ / ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡುವ ಕುರಿತ ಪ್ರಸ್ತಾವನೆಗಳು ಆರ್ಥಿಕ ಇಲಾಖೆಯ ಪರಿಶೀಲನಾ ಹಂತದಲ್ಲಿರುತ್ತದೆ.

ಅಂತೆಯೇ, ಕೃಷಿ ಮಹಾವಿದ್ಯಾಲಯ, ಚಾಮರಾಜನಗರಕ್ಕೆ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಮಂಜೂರು ಮಾಡುವ ಕುರಿತ ಪ್ರಸ್ತಾವನೆಗಳು ಆರ್ಥಿಕ ಇಲಾಖೆಯ ಪರಿಶೀಲನಾ ಹಂತದಲ್ಲಿರುತ್ತದೆ.

ನೂತನ ಸಮಗ್ರ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಬರುವ ಮೈಸೂರು, ಮಂಡ್ಯ, ಹಾಸನ, ಚಾಮರಾಜನಗರ ಮತ್ತು ಕೊಡಗು ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಕೃಷಿ ವಿಜ್ಞಾನ ಕೇಂದ್ರ ಅಖಿಲ ಭಾರತ ಸಂಯೋಜಿತ ಸಂಶೋಧನಾ ಕೇಂದ್ರಗಳಲ್ಲಿನ ಸಿಬ್ಬಂದಿ, ಬೋಧಕ ಹಾಗೂ ವಿಜ್ಞಾನಿಗಳನ್ನು ಬಳಸಿಕೊಂಡು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಮಂಡ್ಯದಲ್ಲಿ ಪ್ರಾರಂಭ ಮಾಡಲಾಗುವುದು. ಪ್ರಸ್ತುತ ನೂತನ ಸಮಗ್ರ ಕೃಷಿ ವಿಶ್ವವಿದ್ಯಾಲಯಕ್ಕೆ ಬೇಕಾದ ಕನಿಷ್ಠ ಮೂಲ ಸೌಕರ್ಯದ ಲಭ್ಯತೆ ಮಂಡ್ಯದಲ್ಲಿರುವ ವಿ.ಸಿ. ಫಾರಂನಲ್ಲಿರುತ್ತದೆ. ಮುಂದೆ ಹಂತ ಹಂತವಾಗಿ ಮೂಲ ಸೌಕರ್ಯಗಳನ್ನು ಹೆಚ್ಚಿಸಿಕೊಳ್ಳಲಾಗುತ್ತದೆ.

ಇ-ಸಂಖ್ಯೆ: AGRI/10/AUB/2025

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು.